ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಟಿ ಆರ್ ಜಿ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಸಾಲದ ಅರ್ಜಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-1 ಎಂದು, ಸ್ಪಾನ್‌ಸರಿಂಗ್ ಆಫ್ ಪ್ರೊಪೋಸಲ್ ಅನ್ನು ಹಾಜರು ಮಾಡಿದ್ದು ಅದನ್ನು ನಿಪಿ-2 ಎಂದು, ಲೋನ್ ಸ್ಯಾಂಗ್‌ಷನ್ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-3 ಎಂದು, ಬಜಟ್ ರಿಪೋರ್ಟನ್ನು ಹಾಜರು ಮಾಡಿದ್ದು ಅದನ್ನು ನಿಪಿ-4 ಎಂದು, ಖಾದಿ ಮತ್ತು ವಿಲೇಜ್ ಇಂಡಸ್ಟ್ರೀಸ್ ಕಮೀಷನ್ ಇವರು ನೀಡಿದ ಪ್ರಮಾಣಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-5 ಎಂದು, ಕೆವಿಐಸಿ ಇವರು ನೀಡಿರು ಪ್ರಶಂಸನಾ ಪತ್ರವನ್ನು ನಿಪಿ-6 ಎಂದು, ಪ್ರತಿವಾದಿ ಸಂಕೇತ್ ಗೌಡ ರವರ ಮಾದರಿ ಸಹಿಯ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-7 ಎಂದು, ದಿನಾಂಕಃ07.10.2020 ರಂದು ನೀಡಿದ ಸಾಲದ ಅರ್ಜಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-8 ಎಂದು, ಸಾಲ ಮಂಜೂರಾತಿ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-9 ಎಂದು, ಕೊಟೇಶನ್ ಅನ್ನು ಹಾಜರು ಮಾಡಿದ್ದು ಅದನ್ನು ನಿಪಿ-10 ಎಂದು, ಇನ್ ವಾಯ್ಸ್ ಅನ್ನು ಹಾಜರು ಮಾಡಿದ್ದು ಅದನ್ನು ನಿಪಿ-11 ಎಂದು, ಸಾಲದ ಕರಾರುಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-12 ಎಂದು, ಆಧಾರ ಮಾಡಿದ ಮಿಷನರಿಗಳ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-13

ಎಂದು, ದಿನಾಂಕಃ26.04.2022 ರಂದು ವಕೀಲರ ಮೂಲಕ ನೀಡಿದ ತಿಳುವಳಿಕೆ ನೋಟೀಸನ್ನು ಹಾಜರು ಮಾಡಿದ್ದು ಅದನ್ನು ನಿಪಿ-14 ಎಂದು, ನೋಟೀಸನ್ನು ಕಳುಹಿಸಿದ್ದಕ್ಕೆ ನೀಡಿದ ಅಂಚೆ ರಶೀದಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-15 ಎಂದು, ಪ್ರತಿವಾದಿಯವರ ಉಳಿತಾಯ ಖಾತೆಗೆ ಸಂಬಂಧಪಟ್ಟ ಸ್ಟೇಟ್ ಮೆಂಟನ್ನು ಹಾಜರು ಮಾಡಿದ್ದು ಅದನ್ನು ನಿಪಿ-16 ಎಂದು, ಪ್ರತಿವಾದಿಯವರ ಸಾಲದ ಖಾತೆಗೆ ಸಂಬಂಧಪಟ್ಟ ಸ್ಟೇಟ್ ಮೆಂಟನ್ನು ಹಾಜರು ಮಾಡಿದ್ದು ಅದನ್ನು ನಿಪಿ-17 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು ಪ್ರತಿವಾದಿ ಪರ ಶ್ರೀ ವಕೀಲರಿಂದಃ</u>

ಪ್ರತಿವಾದಿಗಳು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು, ಪ್ರತಿವಾದಿಗಳು ಲಿಖಿತ ಹೇಳಿಕೆ ಸಲ್ಲಿಸದ ಕಾರಣ ಈ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಃ ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.